ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 4-1-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **8th Global Communication Research Association Conference on 'Innovative Digital Applications for Sustainable Development.**<br>**Inauguration:**<br><br>**Siddaramaiah, Chief Minister of Karnataka.**<br><br>**Preside:**<br><br>**Krishna Byregowda, Minister for Agricultural**<br><br>**Chief Guest:**<br><br>**S.R. Patil, Minster for IT and BT**<br><br>**Note:**<br>**Vehicle arrangements has been made from Media Persons at 8-45 AM on that day from Press Club, Cubbon Park.**<br><br>**Contact Person:**<br><br>**Dr. K. Shivaramu, Professor,** | **05-01-2016**<br>**Tuesday, at 9-30 AM** | **Kuvempu Sabhangana, G.K.V.K. University of Agricultural Sciences, Bengaluru.** |

| | | | |
|---|---|---|---|
| | **Mob no. 9972035456** | | |
| 2 | ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ಪೂರ್ವಭಾವಿ ಸಿದ್ಧತೆಗಳ ಬಗ್ಗೆ ಪತ್ರಿಕಾಗೋಷ್ಠಿ:<br><br>ಶ್ರೀ ಆರ್. ರೋಷನ್ ಬೇಗ್, ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಸಚಿವರು ಮತ್ತು ಕಾರ್ಯಕಾರಿ ಅಧ್ಯಕ್ಷರು, ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವ<br><br>ಡಾ, ಎನ್.ಎಸ್. ಚನ್ನಪ್ಪಗೌಡ, ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ.<br><br>ಎಸ್. ವಿ. ರಾಜೇಂದ್ರಸಿಂಗ್ ಬಾಬು, ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ.<br><br>ಎನ್. ಆರ್. ವಿಶುಕುಮಾರ್, ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ. | 05–01–2016 ಮಂಗಳವಾರ ಬೆಳಿಗ್ಗೆ 11–15 ಗಂಟೆಗೆ | "ಸುಲೋಚನಾ ಸಭಾಂಗಣ" ವಾರ್ತಾಸೌಧ, ನಂ 17, ಇನ್‌ಫೆಂಟ್ರ ರಸ್ತೆ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಕ್ರಾಫ್ಟ್ ಕೋರ್ಸ್ ಇನ್ ಟೈಲರಿಂಗ್ ಪರೀಕ್ಷೆ

ಬೆಂಗಳೂರು, ಜನವರಿ 4, 2016 (ಕರ್ನಾಟಕ ವಾರ್ತೆ)

ತಾಂತ್ರಿಕ ಪರೀಕ್ಷಾ ಮಂಡಳಿ, ಅರಮನೆ ರಸ್ತೆ, ಬೆಂಗಳೂರು ಇವರಿಂದ ಪ್ರತಿ ವರ್ಷದಂತೆ ನಡೆಸುವ ಒಂದು ವರ್ಷದ ಕ್ರಾಫ್ಟ್ ಕೋರ್ಸ್ ಇನ್ ಟೈಲರಿಂಗ್ ಪರೀಕ್ಷೆಯನ್ನು 2016 ರ ಡಿಸೆಂಬರ್ ತಿಂಗಳಿನಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಈ ಪರೀಕ್ಷೆಗೆ ಬಾಹ್ಯ ಅಭ್ಯರ್ಥಿಯಾಗಿ ಪರೀಕ್ಷೆಗೆ ಹಾಜರಾಗಲು ಬಯಸುವ 7ನೇ

ತರಗತಿ ಪಾಸಾದ ಅಥವಾ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಅರ್ಹತಾ ಪತ್ರವನ್ನು ಪಡೆಯುವ ಶುಲ್ಕ ಪಾವತಿ ಮಾಡಿ ಅರ್ಜಿ ಸಲ್ಲಿಸಲು ವಿವರಗಳು ಈ ಕೆಳಕಂಡಂತಿವೆ.

ಕೊನೆಯ ದಿನಾಂಕ 30-01-2016 ರವರೆಗೆ ಅರ್ಹತಾ ಪತ್ರ ಶುಲ್ಕ ರೂ. 20-00. 05-03-2016 ರವರೆಗೆ ಶುಲ್ಕ ಹಾಗೂ ರೂ. 5-00 ದಂಡದೊಂದಿಗೆ (ಒಟ್ಟು ರೂ.25-00)

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದಾಗಿದೆ.

ಬಾಬು:ಜಿಪಿಆರ್.

## ದ್ವಿತೀಯ ಇಲಾಖಾ ಪರೀಕ್ಷೆ ಫಲಿತಾಂಶ ಪ್ರಕಟ

ಬೆಂಗಳೂರು, ಜನವರಿ 4, 2016 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ಆಯೋಗದ ವೆಬ್‌ಸೈಟ್ http://kpsc.kar.nic ನಲ್ಲಿ ಪ್ರಕಟಿಸಿದೆ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಅಂಕಗಳ ಮರು-ಎಣಿಕೆಗಾಗಿ ಫಲಿತಾಂಶ ಪ್ರಕಟವಾದ ದಿನಾಂಕದಿಂದ 30 ದಿನಗಳೊಳಗಾಗಿ ನಿಗದಿತ ಶುಲ್ಕದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

2016 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಅರ್ಹ ಸರ್ಕಾರಿ ನೌಕರರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು 4-1-2016 ರಿಂದ 2-2-2016 ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಬಹುದಾಗಿದೆ. ತತ್ಸಬಂದ ಶುಲ್ಕವನ್ನು ಸ್ಕ್ಯಾನರ್ ಸೌಲಭ್ಯವಿರುವ ರಾಜ್ಯದ ಯಾವುದೇ ಗಣಕೀಕೃತ ಅಂಚೆ ಕಚೇರಿಗಳಲ್ಲಿ 3-2-2016 ರವರೆಗೆ ಪಾವತಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್‌ನ್ನು ನೋಡಬಹುದಾಗಿದೆ ಹಾಗೂ ದೂರವಾಣಿ ಸಂಖ್ಯೆ 080-30574944/30574945/30574957 ಸಂಪರ್ಕಿಸಬಹುದಾಗಿದೆ.

## ಛಾಯಾಚಿತ್ರ ಶೀರ್ಷಿಕೆ:

ಕರ್ನಾಟಕ ನೀರಾವರಿ ನಿಗಮಕ್ಕೆ ರಾಷ್ಟ್ರಮಟ್ಟದ ಕೇಂದ್ರೀಯ ನೀರಾವರಿ ಮತ್ತು ಇಂಧನ ಮಂಡಳಿ ಪ್ರಶಸ್ತಿ ಬಂದಿದ್ದು ಪ್ರಶಸ್ತಿಯನ್ನು ಕೇಂದ್ರ ಜಲಸಂಪನ್ಮೂಲ ಸಚಿವೆ ಶ್ರೀಮತಿ ಉಮಾಭಾರತಿ ಅವರು ಕರ್ನಾಟಕ ನೀರಾವರಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಶ್ರೀ ಆರ್. ರುದ್ರಯ್ಯ ಅವರಿಗೆ ವಿತರಿಸಿದರು.